ಹಾಸನ ಪಶುವೈದ್ಯಕೀಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು 2011–12 ರ ಆಗಸ್ಟ್ ಅಂತ್ಯದಲ್ಲಿ ಪದವಿಯನ್ನು ಪಡೆಯಲಿದ್ದು ಪಶುವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗ ಮಾದರಿಯಂತೆ ಕರ್ನಾಟಕ ಪಶುವೈದ್ಯಕೀಯ, ಪರಿಷತ್ತಿನ ನೋಂದಣಿಯನ್ನು ನೀಡಲು ಕ್ರಮ ಜರುಗಿಸಲಾಗುವುದು.

ಈ) ಹಾಸನ ಪಶುವೈದ್ಯಕೀಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು 2011–12 ರ ಜುಲೈ–ಆಗಸ್ಟ್ ಅಂತ್ಯದಲ್ಲಿ ಪದವಿಯನ್ನು ಪಡೆಯಲಿದ್ದು ಪಶುವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗ ಮಾದರಿಯಂತೆ ಕರ್ನಾಟಕ ಪಶುವೈದ್ಯಕೀಯ ಪರಷತ್ತಿನ ನೋಂದಣಿಯನ್ನು ನೀಡಲು ಕ್ರಮ ಜರುಗಿಸಲಾಗುವುದು.

**ಚಿಕ್ಕಬಳ್ಳಾಪುರದಲ್ಲಿ ಬಾಲಕಿಯರ ಪದವಿ ಪೂರ್ವ ಕಾಲೇಜು**

**98 : (86)**

**ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ)**

ಅ) ಚಿಕ್ಕಬಳ್ಳಾಪುರ ನಗರದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು (ಬಾಲಕ ಮತ್ತು ಬಾಲಕಿಯರ ಪೂರ್ಣ ವಿವರಗಳನ್ನು ನೀಡುವುದು)

ಇ) ಈ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಹಾಗೂ ಇತರೆ ಸಿಬ್ಬಂದಿ ವರ್ಗಗಳ ಸಂಖ್ಯೆ ಎಷ್ಟು (ವಿಷಯ ಹಾಗೂ ವೃಂದವಾರು ವಿವರಗಳನ್ನು ನೀಡುವುದು)

ಈ) ಈ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಬಾಲಕಿಯರಿಗೆ ಮೂಲಭೂತ ಸೌಲಭ್ಯಗಳ ಕೊರೆತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಚಿಕ್ಕಬಳ್ಳಾಪುರದಲ್ಲಿ ಪ್ರತ್ಯೇಕ ಬಾಲಕಿಯರ ಪದವಿ ಪೂರ್ವ ಕಾಲೇಜು ಪ್ರಾರಂಭಿಸದೇ ಇರಲು ಕಾರಣವೇನು;

ಊ) ಮುಂದಿನ ಶೈಕ್ಷಣಿಕ ವರ್ಷದಿಂದಾದರೂ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ತೆರೆಯಲು ಸರ್ಕಾರ ಕ್ರಮಕೈಗೊಳ್ಳುವುದೇ ?

**ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)**

ಅ) ಹೌದು, ಚಿಕ್ಕಬಳ್ಳಾಪುರ ನಗರದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಇದೆ.

ಆ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು; ಚಿಕ್ಕಬಳ್ಳಾಪುರ ಇಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಈ ಕೆಳಗಿನಂತಿದೆ :

| ವರ್ಷ | ದಾಖಲಾತಿ ವಿವರಗಳು | | | | ಒಟ್ಟು |
|---|---|---|---|---|---|
| | I P.U.C. | | II P.U.C. | | |
| | ಬಾಲಕರು | ಬಾಲಕಿಯರು | ಬಾಲಕರು | ಬಾಲಕಿಯರು | |
| 2009–10 | 908 | 738 | 440 | 519 | **2605** |
| 2010–11 | 623 | 538 | 653 | 605 | **2419** |
| 2011–12 | 776 | 610 | 423 | 420 | **2229** |

ಇ) ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ ಇಲ್ಲಿ 36 ಬೋಧಕ, 05 ಬೋಧಕೇತರ ಸಿಬ್ಬಂದಿವರ್ಗದವರು ಕಾರ್ಯನಿರ್ವಹಿಸುತ್ತಿದ್ದಾರೆ. (ವಿವರ ಈ ಕೆಳಗಿನಂತಿದೆ).

| ಬೋಧನಾ ವಿಷಯ | ಸಂಖ್ಯೆ | ಬೋಧಕೇತರ ಸಿಬ್ಬಂದಿ | ಸಂಖ್ಯೆ |
|---|---|---|---|
| ಕನ್ನಡ | 05 | ಪ್ರಥಮ ದರ್ಜೆ ಸಹಾಯಕರು | 01 |
| ಇಂಗ್ಲೀಷ್ | 06 | ದ್ವಿತೀಯ ದರ್ಜೆ ಸಹಾಯಕರು | 01 |
| ಇತಿಹಾಸ | 04 | ಆಟೆಂಡರ್ | 01 |
| ಅರ್ಥಶಾಸ್ತ್ರ | 05 | ಗ್ರೂಪ್–ಡಿ | 02 |
| ರಾಜ್ಯಶಾಸ್ತ್ರ | 03 | | |
| ಭೌತಶಾಸ್ತ್ರ | 03 | | |
| ರಸಾಯನಶಾಸ್ತ್ರ | 02 | | |
| ಗಣಿತ | 03 | | |
| ಜೀವಶಾಸ್ತ್ರ | 03 | | |
| ಭೂಗೋಳಶಾಸ್ತ್ರ | 01 | | |
| ವಾಣಿಜ್ಯಶಾಸ್ತ್ರ | 01 | | |

ಬಂದಿದೆ. ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ ಕಾಲೇಜಿಗೆ 2011–12ನೇ ಸಾಲಿನಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಳ್ಳಲು ರೂ. 80,000 ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಈ) ಸರ್ಕಾರದ ಆದೇಶ ಸಂಖ್ಯೆ : ಇಡಿ 451 ಯೋಯೋಕ 009 ದಿನಾಂಕ 20–2–2010 (ಇಡಿ 21 ಸ್ವೀಮರ (ಯುನಿಕ್) 2010 ದಿನಾಂಕ : 20–2–2010 ರಲ್ಲಿ ಸರ್ಕಾರವು ಹಾಲಿ ಮಂಜೂರಾಗಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುವವರೆಗೆ

ಹೊಸದಾಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸದಿರಲು ತೀರ್ಮಾನಿಸಲಾಗಿದೆ.

ಊ) ಈಗ ಸರ್ಕಾರದ ಪತ್ರ ಸಂಖ್ಯೆ : ಇಡಿ 458 ಎಸ್‌ಹೆಚ್‌ಹೆಚ್ 2011 ದಿನಾಂಕ : 12-08-2011 ರಲ್ಲಿ ಕ್ರೋಢೀಕೃತ ಪ್ರಸ್ತಾವನೆಗಳನ್ನು ಕಳುಹಿಸುವಂತೆ ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆಯನ್ನು ಕೋರಲಾಗಿದೆ. ಆಯುಕ್ತರಿಂದ ಪ್ರಸ್ತಾವನೆ ಬರುವುದನ್ನು ನಿರೀಕ್ಷಿಸಲಾಗುತ್ತಿದೆ.

**ಶಾಸಕರ ಪ್ರದೇಶಾಭಿವೃದ್ಧಿ ನಿಧಿ**

**127 : (269)**

**ಶ್ರೀ ಖಾದರ್ ಯು.ಟಿ. (ಮಂಗಳೂರು)**

ಅ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಸರಿಯಾದ ಸಮಯಕ್ಕೆ ಬಿಡುಗಡೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಬಿಡುಗಡೆ ಮಾಡದೇ ಇರುವುದರಿದ ತ್ವರಿತವಾಗಿ ಶಾಸಕರು ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಗುತ್ತಿರುವ ತೊಂದರೆ ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ (ವಿವರ ಒದಗಿಸುವುದು) ?

**ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿ)**

ಅ) ಹೌದು.

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಮಾರ್ಗಸೂಚಿಯನುಸಾರ ಹಿಂದಿನ ಕಂತಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ಆಧರಿಸಿ ಮುಂದಿನ ಕಂತುಗಳನ್ನು ಬಿಡುಗಡೆ ಮಾಡಲಾಗುವುದು. ಪ್ರಸ್ತುತ ವರ್ಷದಲ್ಲಿ ಕೊನೆಯ ಕಂತಿನ ಹಣ ಬಿಡುಗಡೆ ಮಾಡುವ ಮುನ್ನ ಎಲ್ಲಾ ಜಿಲ್ಲಾಧಿಕಾರಿಗಳಿಂದ ಲಭ್ಯವಿರುವ ಹಾಗೂ ಬಿಡುಗಡೆಯಾದ ಹಣದ ವಿವರಗಳನ್ನು ಪಡೆದಿದ್ದು, 13 ಜಿಲ್ಲೆಗಳಿಂದ ಮಾತ್ರ ಹಣ ವಿನಿಯೋಗದ ಮಾಹಿತಿ ಸ್ವೀಕರಿಸಲಾಗಿದೆ. ಈ ಜಿಲ್ಲೆಗಳಲ್ಲಿ ಶಾಸಕರ ಅನುದಾನಕ್ಕೆ ಸಂಬಂಧಿಸಿದ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಲಭ್ಯವಿದ್ದ ಹಣದ ಶೇ. 18 ರಿಂದ 44 ರಷ್ಟು ಮಾತ್ರ ಖರ್ಚಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆ. ಆದಾಗ್ಯೂ ದಿ. 07-03-2012 ರಂದು ಕೊನೆಯ ಕಂತನ್ನು 28 ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಉಡುಪಿ, ಚಿಕ್ಕಮಗಳೂರು ಜಿಲ್ಲೆಗಳಿಗೆ ಕೊನೆಯ ಕಂತನ್ನು 22-3-2012 ರಂದು ಬಿಡುಗಡೆ ಮಾಡಲಾಗಿದೆ.